ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರಃ1202/2013

ಚಾಸಾಃ 2 ಪ್ರಾಸಾಃ2

ದಿನಾಂಕಃ 21.11.2023

ವಾಗ್ಮೂಲದವರ ಹೆಸರು : ಶ್ರೀ

ತಂದೆಯ ಹೆಸರು :

ವಯಸ್ಸು : ವರ್ಷ

ಉದ್ಯೋಗ :

ವಾಸ ಸ್ಥಳ :

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ಆರೋಪಿಯ ಪರಿಚಯವಿದೆ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆ ನಡೆದಿರುವುದಿಲ್ಲ. ಆರೋಪಿಗಳು ಅಕ್ರಮ ಕೂಟ ಕಟ್ಟಿಕೊಂಡು ನಮ್ಮ ಮನೆಗೆ ಬಂದು ಅಕ್ರಮ ಪ್ರವೇಶ ಮಾಡಿಲ್ಲ, ನನಗೆ ಆರೋಪಿತರು ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಜೀವ ಬೆದರಿಕೆ ಹಾಕಿಲ್ಲ, ನಮ್ಮ ಮೇಲೆ ಹಲ್ಲೆ ಮಾಡಿಲ್ಲ. ನಾನು ಆರೋಪಿತರ ವಿರುದ್ದ ಯಾವುದೇ ದೂರನ್ನು ನೀಡಿಲ್ಲ ಹಾಗೂ ಹೇಳಿಕೆಯನ್ನು ನೀಡಿರುವುದಿಲ್ಲ. ಸಾಕ್ಷಿಗೆ ಕಡತದಲ್ಲಿರುವ 2 ದಾಖಲೆಗಳನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-1 ಮತ್ತು 2 ಎಂದು, ಅವುಗಳಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ.

ಸಾಕ್ಷಿಗೆ ನಿಪಿ-2 ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಸುಮಾರು 10 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ.

ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ಈ ಬಗ್ಗೆ ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಈಗ ನಾವು ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಆ ಕಾರಣಕ್ಕೆ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**